# <u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: 'Karnataka State CSR Fund' ಎಂಬ ಹೆಸರಿನಲ್ಲಿ ಚಾಲ್ತಿ ಖಾತೆಯನ್ನು ತೆರೆಯುವ ಬಗ್ಗೆ

**ಓದಲಾಗಿದೆ:1) ಯೋಜನಾ ಇಲಾಖೆಯ ಕಡತ ಸಂಖ್ಯೆ: ಪಿಡಿಎಸ್-ಎಚ್ ಡಿಡಿ-12/2021ಯ ಟಿಪ್ಪಣಿ ಸಂಖ್ಯೆ:11, ದಿನಾಂಕ:30-03-2021.**

2) ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ 195 ವೆಚ್ಚ 6/2021(ಇ), ದಿನಾಂಕ:30-03-2021.

***

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ:(1) ರಲ್ಲಿ ಸೂಚಿಸಿರುವಂತೆ ಹಾಗೂ ಕ್ರಮ ಸಂಖ್ಯೆ:(2)ರಲ್ಲಿ ಆರ್ಥಿಕ ಇಲಾಖೆಯು ನೀಡಿರುವ ಸಹಮತಿಯಂತೆ ರಾಜ್ಯದ ಸಾರ್ವಜನಿಕ ಉದ್ದಿಮೆಗಳಲ್ಲಿ ನಿಯಮಾನುಸಾರ ನಿಗದಿಯಾಗಿರುವಂತಹ ಸಾಮಾಜಿಕ ಸಾಂಸ್ಥಿಕ ಜವಾಬ್ದಾರಿ (ಸಿ.ಎಸ್.ಆರ್) ಅನುದಾನದ ಮೊತ್ತವನ್ನು ನಿಯಂತ್ರಿಸಲು ಒಂದು ಬ್ಯಾಂಕ್ ಖಾತೆಯನ್ನು ತೆರೆಯಲು ದಿನಾಂಕ:25-03-2021ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಾರ್ವಜನಿಕ ಉದ್ದಿಮೆಗಳ ಇಲಾಖೆರವರು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನಾ ಇಲಾಖೆ ಇವರೊಂದಿಗೆ ಚರ್ಚಿಸಿದಂತೆ ಈ ಕೆಳಕಂಡ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: ಸಾಉಇ 10 ಎಸ್ ಪಿಯು 2021,</u>

<u>ಬೆಂಗಳೂರು, ದಿನಾಂಕ:31-03-2021.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಸರ್ಕಾರದ ಪದ ನಿಮಿತ್ತ ಕಾರ್ಯದರ್ಶಿ, ಸಾರ್ವಜನಿಕ ಉದ್ದಿಮೆಗಳ ಇಲಾಖೆ ಹಾಗೂ ಸರ್ಕಾರದ ಉಪ ಕಾರ್ಯದರ್ಶಿ, ಸಾರ್ವಜನಿಕ ಉದ್ದಿಮೆಗಳ ಇಲಾಖೆ ಇವರುಗಳು ಜಂಟಿಯಾಗಿ ನಿಯಂತ್ರಿಸುವಂತೆ 'Karnataka State CSR Fund' ಎಂಬ ಹೆಸರಿನಲ್ಲಿ ಚಾಲ್ತಿ ಖಾತೆಯನ್ನು ಎಸ್.ಬಿ.ಐ., ಎಂ.ಎಸ್.ಬಿಲ್ಡಿಂಗ್ ಬ್ರಾಂಚ್, ಬೆಂಗಳೂರು-560 001 ಇಲ್ಲಿ ತೆರೆಯಲು ಅನುಮತಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ 195 ವೆಚ್ಚ 6/2021(ಇ) ದಿನಾಂಕ:30-03-2021 ರಲ್ಲಿ ನೀಡಿದ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಎನ್.ಶಾರದಾಂಬ)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ)
ಸಾರ್ವಜನಿಕ ಉದ್ದಿಮೆಗಳ ಇಲಾಖೆ

...2/-

ಇವರಿಗೆ:

1) ಪ್ರಧಾನ ಮಹಾಲೇಖಪಾಲರು(ಜಿ&ಎಸ್.ಎಸ್.ಎ)/(ಆರ್&ಎಸ್.ಎ)(ಎ&ಇ), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
3) ಸರ್ಕಾರದ ಎಲ್ಲ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ. ಸೌಧ, ಬೆಂಗಳೂರು
5) ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
6) ಖಜಾನಾಧಿಕಾರಿ, ರಾಜ್ಯ ಹುಜೂರು ಖಜಾನೆ, ಬೆಂಗಳೂರು
7) ಎಲ್ಲಾ ಸಾರ್ವಜನಿಕ ಉದ್ದಿಮೆಗಳ ವ್ಯವಸ್ಥಾಪಕ ನಿರ್ದೇಶಕರುಗಳು.
8) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಾರ್ವಜನಿಕ ಉದ್ದಿಮೆಗಳ ಇಲಾಖೆ
9) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
10) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಾರ್ವಜನಿಕ ಉದ್ದಿಮೆಗಳ ಇಲಾಖೆ
11) ಶಾಖಾ ರಕ್ಷಾ ಕಡತ